ಗ್ರಾಮದ ನೀರು ಸರಬರಾಜು ಯೋಜನೆಯು ಪ್ರಗತಿಯಲ್ಲಿದ್ದು, ಈ ಯೋಜನೆಯನ್ನು 2002-03ನೇ ಸಾಲಿನಲ್ಲಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ನಮ್ಮ ಹೊಲ ನಮ್ಮ ರಸ್ತೆ ಯೋಜನೆ

1758 (2109) ಶ್ರೀ ಎಂ.ಜಿ. ಮುಳೆ (ಬಸವಕಲ್ಯಾಣ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) 2001-02 ನೇ ಸಾಲಿನ ಬಜೆಟ್‌ನಲ್ಲಿ ನಮ್ಮ ಹೊಲ ನಮ್ಮ ರಸ್ತೆ ಎಂಬ ಹೊಸ ಯೋಜನೆಯನ್ನು ಜಾರಿಗೆ ತಂದಿರುವುದು ಸರ್ಕಾರದ ಗಮನದಲ್ಲಿಯೇ

2) ಇದ್ದಲ್ಲಿ ಸದರಿ ಯೋಜನೆಗೆ ಅನುದಾನ ಬಿಡುಗಡೆ ಮಾಡಲಾಗಿದೆಯೇ;

3) ಬಸವಕಲ್ಯಾಣ ಮತ ಕ್ಷೇತ್ರದಲ್ಲಿ ಈ ಯೋಜನೆಯನ್ನು ಜಾರಿಗೆ ತರಲಾಗಿದೆಯೇ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

1) ಇದೆ

2) ಇಲ್ಲ

3) ಇಲ್ಲ

ಬಸವಕಲ್ಯಾಣ ತಾಲ್ಲೂಕಿಗೆ ಮಂಜೂರಾದ ಪ್ರಾಥಮಿಕ ಶಾಲಾ ಶಿಕ್ಷಕರು

1759 (2110) ಶ್ರೀ ಎಂ.ಜಿ. ಮುಳೆ (ಬಸವ ಕಲ್ಯಾಣ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ತಾಲ್ಲೂಕಿಗೆ ಮಂಜೂರಾದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಖ್ಯೆ ಎಷ್ಟು? (ಕನ್ನಡ, ಉರ್ದು, ಮರಾಠಿ ಮಾಧ್ಯಮವಾರು ವಿವರ ನೀಡುವುದು)

ಆ) ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಭಾಷಾವಾರು ವಿವರ ನೀಡುವುದು)

ಇ) ಬಸವಕಲ್ಯಾಣ ತಾಲ್ಲೂಕಿನಲ್ಲಿ ಸಾಕಷ್ಟು ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳು ಖಾಲಿ ಇದ್ದುದರಿಂದ ಹಲವು ಶಾಲೆಗಳು ತೆರೆಯಲಾರದ ಪರಿಸ್ಥಿತಿ ಇರುವುದು. ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಖಾಲಿ ಹುದ್ದೆಗಳನ್ನು ಎಂದು ತುಂಬಲಾಗುವುದು?

ಪ್ರೋ।। ಬಿ.ಕೆ. ಚಂದ್ರಶೇಖರ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಬಸವಕಲ್ಯಾಣ ತಾಲ್ಲೂಕಿಗೆ ಮಂಜೂರಾದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಖ್ಯೆ

1.	ಕನ್ನಡ	733
2.	ಉರ್ದು	64
3.	ಮರಾಠಿ	244
4.	ಆಂಗ್ಲ	32
5.	ಹಿಂದಿ	20
6.	ದೈಹಿಕ ಶಿಕ್ಷಕರು	58
7.	ಚಿತ್ರಕಲೆ	02